6

ಶಾಖೆ / ವಿಷಯ : DEPARTMENT / SUBJECT: ನಿಧನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 06/08/2020

# ಶಿವಾಜಿರಾವ್ ಪಾಟೀಲ್ ನಿಧನ



ಪುಣೆ (ಪಿಟಿಐ): ಅನಾರೋಗ್ಯದಿಂದ ಬಳಲುತ್ತಿದ್ದ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಶಿವಾಜಿರಾವ್ ಪಾಟೀಲ್ ನೀಲಂಗೇಕರ್ (89) ಬುಧವಾರ ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ.

ಶಿವಾಜಿರಾವ್ ಅವರು ಹೃದ್ರೋಗ ಹಾಗೂ ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿದ್ದರು ಎಂದು ಅವರಿಗೆ ಚಿಕಿತ್ಸೆ ನೀಡುತ್ತಿದ್ದ ಪುಣೆ ಆಸ್ಪತ್ರೆ ವೈದ್ಯರು ತಿಳಿಸಿದ್ದಾರೆ.

ಜುಲೈ ತಿಂಗಳಲ್ಲಿ ಶಿವಾಜಿರಾವ್ ಅವರಿಗೆ ಕೊರೊನಾ ಸೋಂಕು ದೃಢಪಟ್ಟಿತ್ತು. ಈ ಸಂಬಂಧ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿ, ಮನೆಗೆ ತೆರಳಿದ್ದರು. ಮರಾಠವಾಡ ಪ್ರದೇಶದ ಲಾತೂರ್‌ನ ಹಿರಿಯ ಕಾಂಗ್ರೆಸ್ ಮುಖಂಡ ನೀಲಂಗೇಕರ್ ಅವರು ಜೂನ್ 1985 ರಿಂದ ಮಾರ್ಚ್ 1986ರವರೆಗೆ ಮಹಾರಾಷ್ಟ್ರದ ಮುಖ್ಯಮಂತ್ರಿಯಾಗಿದ್ದರು. 1985ರಲ್ಲಿ ತಮ್ಮ ವಿರುದ್ಧ ವೈದ್ಯಕೀಯ ಪರೀಕ್ಷೆ ಹಗರಣದ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.